ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲೀಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

**ಸಂಖ್ಯೆ: DPA/TP/CC/136/2023-24** | 1678 **ದಿನಾಂಕ:** 30 MAR 2024

## "ಪ್ರಾರಂಭಿಕ ಪ್ರಮಾಣ ಪತ್ರ"

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)**
**(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)**

**ವಿಷಯ:** ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 29/1 ಮತ್ತು 29/2 ರಲ್ಲಿ ಒಟ್ಟು 04ಎಕರೆ 32ಗುಂಟೆ+00-03ಗುಂಟೆ 'ಎ' ಖರಾಬ್ ಅಥವಾ 19728.15 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ಅನುಮೋದಿಸಲಾಗಿರುವ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯ ಖಾತಾ ಸಂಖ್ಯೆ 514/146/29/1 ಮತ್ತು 29/2 (ಸ್ವತ್ತಿನ ಸಂಖ್ಯೆ: 3343022532) ರ ಪ್ರದೇಶದಲ್ಲಿ 2 ತಳ ಅಂತಸ್ತು, ನೆಲ+14 ಮೇಲಂತಸ್ತಿನ ವಸತಿ ಕಟ್ಟಡ (Amenities ಒಳಗೊಂಡಂತೆ) ಕಟ್ಟಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

**ಉಲ್ಲೇಖ:**
1. ಪ್ರಾಧಿಕಾರದಿಂದ ಮೆ. ಡಿ.ಎಸ್.ಮ್ಯಾಕ್ಸ್ ಪ್ರಾಪರ್ಟಿಸ್ ಪ್ರೈ.ಲಿ ರವರಿಗೆ ಅನುಮೋದನೆ ನೀಡಲಾಗಿರುವ ಅಭಿವೃದ್ಧಿ ಯೋಜನಾ ನಕ್ಷೆ ದಿ:09/02/2024.
2. ಮೆ. ಡಿ.ಎಸ್.ಮ್ಯಾಕ್ಸ್ ಪ್ರಾಪರ್ಟಿಸ್ ಪ್ರೈ.ಲಿ ರವರು ಸಲ್ಲಿಸಿರುವ ಮನವಿ ಅರ್ಜಿ ಸ್ವೀಕೃತಿ ಸಂಖ್ಯೆ:2004 ದಿ:23/02/2024.
3. ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿ: 15/03/2024.
4. ಅರ್ಜಿದಾರರು ರಶೀದಿ ಸಂಖ್ಯೆ: 2049, ದಿ:20/03/2024, ರಂತೆ ರೂ.54,02,400/- (ಐವತ್ತನಾಲ್ಕು ಲಕ್ಷದ ಎರಡು ಸಾವಿರದ ನಾಲ್ಕು ನೂರು ರೂಪಾಯಿಗಳು ಮಾತ್ರ) ಗಳು ಮಾತ್ರ ಪಾವತಿಸಿರುತ್ತಾರೆ.

********

ಮೆ. ಡಿ.ಎಸ್.ಮ್ಯಾಕ್ಸ್ ಪ್ರಾಪರ್ಟಿಸ್ ಪ್ರೈ.ಲಿ ರವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಬಿಸುವನಹಳ್ಳಿ ಗ್ರಾಮದ ಸರ್ವೆ ನಂ. 29/1 ಮತ್ತು 29/2 ರಲ್ಲಿ ಒಟ್ಟು 04ಎಕರೆ 32ಗುಂಟೆ+00-03ಗುಂಟೆ 'ಎ' ಖರಾಬ್ ಅಥವಾ 19728.15 ಚ.ಮೀ ವಿಸ್ತೀರ್ಣದ ಪ್ರದೇಶಕ್ಕೆ ದಿನಾಂಕ:20.12.2023 ರಂದು ನಡೆದ ಪ್ರಾಧಿಕಾರದ 26 ನೇ ಸಭೆಯ ವಿಷಯ ಸಂಖ್ಯೆ: 26.36 ರ ತೀರ್ಮಾನದಂತೆ ಉಲ್ಲೇಖ (1) ರಲ್ಲಿನ ಅನುಮೋದಿತ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯ ಖಾತಾ ಸಂಖ್ಯೆ 514/146/29/1 ಮತ್ತು 29/2 (ಸ್ವತ್ತಿನ ಸಂಖ್ಯೆ: 3343022532) ರ ಪ್ರದೇಶದಲ್ಲಿ 2 ತಳ ಅಂತಸ್ತು, ನೆಲ+14 ಮೇಲಂತಸ್ತಿನ ವಸತಿ ಕಟ್ಟಡ (Amenities ಒಳಗೊಂಡಂತೆ) ನಿರ್ಮಿಸುವ ಸಂಬಂಧ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಉಲ್ಲೇಖ (2) ರಂತೆ ಅರ್ಜಿ ಸಲ್ಲಿಸಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 234 ಬಿಎಂಆರ್ 2023 (ಇ) ದಿನಾಂಕ: 20.11.2023 ರ ಆದೇಶದಂತೆ, ದಿನಾಂಕ: 23.01.2024 ರಂದು ಸನ್ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಮತ್ತು ಜಲ ಸಂಪನ್ಮೂಲ ಸಚಿವರು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದ ಸಭೆಯ ನಡಾವಳಿಯ ಅನುಸಾರ ವಸತಿ ಉದ್ದೇಶದ ಕಟ್ಟಡ ನಿರ್ಮಿಸಲು ನಕ್ಷೆಗೆ ಅನುಮೋದನೆ ಹಾಗೂ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರ ಪೂರ್ವಸಮ್ಮತಿ ಪಡೆಯಲಾಗಿರುತ್ತದೆ. ಉಲ್ಲೇಖ (3) ರ ಈ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು 90 ದಿನಗಳೊಳಗಾಗಿ ಪಾವತಿಸಿ, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಯಿಂದ ಪಡೆದ ನಿರಾಕ್ಷೇಪಣಾ ಪತ್ರ ಹಾಗೂ ವಲಯನಿಯಮಾವಳಿಗಳಿಗೆ ಅನುಗುಣವಾಗಿ ತಯಾರಿಸಿದ ಉದ್ದೇಶಿತ ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿರುತ್ತದೆ.

.....2



Housiey.com

ಅರ್ಜಿದಾರರು ಸದರಿ ಮೊತ್ತವನ್ನು ಉಲ್ಲೇಖ (4) ರಂತೆ ಪಾವತಿಸಿದ್ದು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಅಧೀಕ್ಷಕ ಅಭಿಯಂತರರು, ಬೆಸ್ಕಾಂ, ಪೋಲೀಸ್ ಮಹಾನಿರ್ದೇಶಕರು ಹಾಗೂ ನಿರ್ದೇಶಕರು, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ರವರುಗಳು ನೀಡಿರುವ ನಿರಾಕ್ಷೇಪಣಾ ಪತ್ರಗಳನ್ನು ಸಲ್ಲಿಸಿ ಪ್ರಸ್ತಾವನೆ ಸಂಬಂಧ ಕಟ್ಟಡ ನಕ್ಷೆಗೆ ಅನುಮೋದನೆ ಹಾಗೂ ಪ್ರಾರಂಭಿಕ ಪ್ರಮಾಣ ಪತ್ರವನ್ನು ಮಂಜೂರು ಮಾಡಲು ಕೋರುತ್ತಾ, 2 ತಳ ಅಂತಸ್ತು, ನೆಲ+14 ಮೇಲಂತಸ್ತಿನ ವಸತಿ ಕಟ್ಟಡ (Amenities ಒಳಗೊಂಡಂತೆ) ಕಟ್ಟಲು ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

**<u>ನಿಬಂಧನೆಗಳು</u>**

1. ಈ ಪ್ರಾಧಿಕಾರದ ವಸತಿ ಉಪಯೋಗದ ಅಭಿವೃದ್ಧಿ ನಕ್ಷೆ ಅನುಮೋದನೆ ಆದೇಶ ಪತ್ರ ಸಂಖ್ಯೆ: DPA/TP/DP/02/2021-22 ದಿನಾಂಕ: 09-02-2024 ರ ಆದೇಶದಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
2. ಅನುಮೋದಿತ ಕಟ್ಟಡ ನಕ್ಷೆಯಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು ಹಾಗೂ ಯೋಜಿಸಿರುವ ಕಟ್ಟಡವನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸತಕ್ಕದ್ದು.
3. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರಿಂದ ಪಡೆದಿರುವ CFE (Consent Order No. CTE-335400 Dated: 07-01-2023 Valid up to 06-01-2028) ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಅಧೀಕ್ಷಕ ಅಭಿಯಂತರರು, ಬೆಸ್ಕಾಂ ರವರ ಪತ್ರ ಸಂಖ್ಯೆ: SEE/BRC/EE(O)/AEE(O)/AE(O)/F-1(A)&F-21/21-22/5040-42 ದಿನಾಂಕ: 30.12.2021 ರ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪೋಲೀಸ್ ಮಹಾನಿರ್ದೇಶಕರು ಹಾಗೂ ನಿರ್ದೇಶಕರು, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ರವರ ಪತ್ರ ಸಂಖ್ಯೆ: KSFES/NOC/301/2023 ದಿನಾಂಕ: 30.01.2024 ರ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಪ್ರಸ್ತಾಪಿತ ಕಟ್ಟಡದ ಎತ್ತರಕ್ಕೆ ಸಂಬಂಧಿಸಿದಂತೆ Airports Authority Of India ರವರಿಂದ ದಿನಾಂಕ: 04-01-2022 ರಂದು ಪಡೆದಿರುವ No Objection Certificate for Height Clearance ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
7. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ ದಿನಾಂಕ: **<u>30-03-2024</u>** ರಿಂದ **<u>29-03-2026</u>** ರವರೆಗೆ ಮಾತ್ರ ನೀಡಲಾಗಿರುತ್ತದೆ.
8. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ಬಾಶೆಟ್ಟಿಹಳ್ಳಿ ಪಟ್ಟಣ** ಪಂಚಾಯ್ತಿ ರವರಿಂದ ಪಡೆದ ನಂತರ ಅಭಿವೃದ್ಧಿ ಕಾರ್ಯ ಕೈಗೊಳ್ಳತಕ್ಕದ್ದು.
9. ಕಾಲುವೆ/ಕೆರೆ/ಇತ್ಯಾದಿ.... ಬಫರ್‌ಗೆ ಒಳಪಡುವ ಪ್ರದೇಶಕ್ಕೆ ನಿಯಮಾನುಸಾರ ಬಫರ್ ಬಿಡುವ ಷರತ್ತಿಗೊಳಪಟ್ಟಿರುತ್ತದೆ.
10. ಪ್ರಸ್ತಾಪಿತ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಲಾದ ಸರ್ಕಾರಿ ಖರಾಬು ಜಾಗಗಳನ್ನು ಯಥಾರೀತಿಯಾಗಿ ನೆಲದ ಮೇಲೆ ಕಾಯ್ದಿರಿಸಿ ಒತ್ತುವರಿಯಾಗದಂತೆ ಕಾಪಾಡತಕ್ಕದ್ದು.
11. ಅರ್ಜಿದಾರರು ಸರ್ಕಾರದ ಖರಾಬು ಬಗ್ಗೆ ತಪ್ಪು ಮಾಹಿತಿ ನೀಡಿ, ಅನುಮೋದನೆ ಪಡೆದಿದ್ದಲ್ಲಿ ಪ್ರಾಧಿಕಾರದಿಂದ ನೀಡಿರುವ ಅನುಮೋದನೆಯು ತಂತಾನೆ ರದ್ದಾಗುತ್ತದೆ.
12. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ
13. ಕೈಗೊಳ್ಳಬೇಕು. ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಯಾವುದೇ ಬದಲಾವಣೆಯನ್ನು ಮಾಡತಕ್ಕದ್ದಲ್ಲ.
14. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.

......3

ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲಿಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.



15. ಕಟ್ಟಡ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.
16. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rainwater harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಹಾಗೂ ಉದ್ಯಾನವನದಲ್ಲಿ ಗಿಡ/ಮರಗಳನ್ನು ಬೆಳೆಸತಕ್ಕದ್ದು.
17. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.
18. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು ಹಾಗೂ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.
19. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.
20. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.
21. ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಸಹ ಪಡೆಯತಕ್ಕದ್ದು.
22. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

30/3/24

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ,
ದೊಡ್ಡಬಳ್ಳಾಪುರ.

30-03-24 30/3

***ಇವರಿಗೆ:***
**ಮುಖ್ಯಾಧಿಕಾರಿಗಳು,**
ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯ್ತಿ,
ದೊಡ್ಡಬಳ್ಳಾಪುರ ತಾಲ್ಲೂಕು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.